# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:– ಶ್ರೀ ಸಿ.ಎಸ್.ರಾಜಶೇಖರೇಗೌಡ, ತಾಂತ್ರಿಕ ಸಹಾಯಕರು ಇವರ ಅಮಾನತ್ತಿನ ಅವಧಿಯನ್ನು ಕರ್ತವ್ಯದ ಅವಧಿಯೆಂದು ಪರಿಗಣಿಸುವ ಬಗ್ಗೆ – ಆದೇಶ.

ಓದಲಾಗಿದೆ.

1. ಸರ್ಕಾರದ ಆದೇಶ ಸಂಖ್ಯೆ ಗ್ರಾಅಪ 39 ಇಎನ್‌ಕ್ಯೂ 2011, ದಿನಾಂಕ. 19–11–2011.
2. ಸರ್ಕಾರದ ಆದೇಶ ಸಂಖ್ಯೆ ಗ್ರಾಅಪ 39 ಇಎನ್‌ಕ್ಯೂ 2011, ದಿನಾಂಕ. 15–03–2012.
3. ಸರ್ಕಾರದ ಪತ್ರ ಸಂಖ್ಯೆ ಗ್ರಾಅಪ 39 ಇಎನ್‌ಕ್ಯೂ 2011, ದಿನಾಂಕ 31–08–2012.
4. ಶ್ರೀ ಸಿ.ಎಸ್.ರಾಜಶೇಖರಗೌಡ, ತಾಂತ್ರಿಕ ಸಹಾಯಕರು, ಪಂ.ರಾ.ಇಂ.ವೃತ್ತ, ಮೈಸೂರು ಇವರ ಮನವಿ ದಿನಾಂಕ 21–09–2012.

ಪ್ರಸ್ತಾವನೆ:

ಶ್ರೀ ಸಿ.ಎಸ್.ರಾಜಶೇಖರೇಗೌಡ, ತಾಂತ್ರಿಕ ಸಹಾಯಕರು, ಅಧೀಕ್ಷಕ ಅಭಿಯಂತರರವರ ಕಛೇರಿ, ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತ, ಮೈಸೂರು ಇವರು ಮೈಸೂರು ಜಿಲ್ಲೆಯ ಕುಡಿಯುವ ನೀರಿನ ಯೋಜನೆಯ ಅನುಷ್ಠಾನದಲ್ಲಿ ಅನಗತ್ಯ ವಿಳಂಬಕ್ಕೆ ಕಾರಣರಾಗಿದ್ದು, ದುರ್ನಡತೆ, ಅಶಿಸ್ತು, ಮೇಲಾಧಿಕಾರಿಗಳ ಆದೇಶಗಳ ಉಲ್ಲಂಘನೆ, ಬೇಜವಬ್ದಾರಿತನ ಹಾಗೂ ಕರ್ತವ್ಯ ಲೋಪ ಮೇಲ್ನೋಟಕ್ಕೆ ಕಂಡು ಬಂದಿರುವ ಹಿನ್ನಲೆಯಲ್ಲಿ ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ 19–11–2011ರ ಆದೇಶದಲ್ಲಿ ಇವರನ್ನು ಇಲಾಖಾ ವಿಚಾರಣೆ ಕಾಯ್ದಿರಿಸಿ ಸೇವೆಯಿಂದ ಅಮಾನತ್ತುಗೊಳಿಸಲಾಗಿತ್ತು. ನಂತರ ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ದಿನಾಂಕ 15–03–2012ರ ಆದೇಶದಲ್ಲಿ ಈ ಅಧಿಕಾರಿಯ ಅಮಾನತ್ತು ತೆರವುಗೊಳಿಸಲಾಗಿತ್ತು.

ಶ್ರೀ ಸಿ.ಎಸ್.ರಾಜಶೇಖರೇಗೌಡ, ತಾಂತ್ರಿಕ ಸಹಾಯಕರು, ಅಧೀಕ್ಷಕ ಅಭಿಯಂತರರವರ ಕಛೇರಿ, ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತ, ಮೈಸೂರು ಇವರ ವಿರುದ್ಧ ಮಾಡಲಾದ ಆರೋಪಗಳು ಆರ್ಥಿಕ ದುರ್ಬಳಕೆಗೆ ಸಂಬಂಧಿಸಿರುವುದಿಲ್ಲದಿರುವುದರಿಂದ ಮೇಲೆ ಕ್ರಮ ಸಂಖ್ಯೆ (3)ರಲ್ಲಿ ಓದಲಾದ ದಿನಾಂಕ 31–08–2012ರ ಪತ್ರದಲ್ಲಿ ಸದರಿ ಅಧಿಕಾರಿ ವಿರುದ್ಧದ ಶಿಸ್ತು ಕ್ರಮವನ್ನು ಕೈಬಿಡಲಾಗಿದೆ.

--2

ಶ್ರೀ ಸಿ.ಎಸ್.ರಾಜಶೇಖರೇಗೌಡ, ತಾಂತ್ರಿಕ ಸಹಾಯಕರು, ಅಧೀಕ್ಷಕ ಅಭಿಯಂತರವರ ಕಛೇರಿ, ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತ, ಮೈಸೂರು ರವರು ದಿನಾಂಕ 31-08-2012ರ ಸರ್ಕಾರದ ಪತ್ರದಲ್ಲಿ ಅವರನ್ನು ಆರೋಪಗಳಿಂದ ಕೈಬಿಟ್ಟಿರುವುದರಿಂದ ದಿನಾಂಕ 19-11-2011 ರಿಂದ 15-03-2012ರ ವರೆಗಿನ ಅಮಾನತ್ತಿನ ಅವಧಿಯನ್ನು ಕರ್ತವ್ಯದ ಅವಧಿಯೆಂದು ಪರಿಗಣಿಸಲು ಮೇಲೆ ಕ್ರಮ ಸಂಖ್ಯೆ (4)ರಲ್ಲಿ ಓದಲಾದ ದಿನಾಂಕ 21-09-2012ರ ಮನವಿಯಲ್ಲಿ ಕೋರಿರುತ್ತಾರೆ.

ಮೇಲ್ಕಂಡ ಎಲ್ಲಾ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ಸರ್ಕಾರವು ಕೆಳಕಂಡಂತೆ ಆದೇಶಿಸಿದೆ.

**ಆದೇಶ ಸಂಖ್ಯೆ ಗ್ರಾಅಪ 39 ಇಎನ್‌ಕ್ಯೂ 2011, ಬೆಂಗಳೂರು ದಿನಾಂಕ . 25-10-2012**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ, ಶ್ರೀ ಸಿ.ಎಸ್.ರಾಜಶೇಖರೇಗೌಡ, ತಾಂತ್ರಿಕ ಸಹಾಯಕರು, ಅಧೀಕ್ಷಕ ಅಭಿಯಂತರವರ ಕಛೇರಿ, ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತ, ಮೈಸೂರು ಇವರು ದಿನಾಂಕ 19-11-2011 ರಿಂದ 15-03-2012ರ ವರೆಗೆ ಅಮಾನತ್ತಿನಲ್ಲಿ ಕಳೆದ ಅವಧಿಯನ್ನು ಕರ್ನಾಟಕ ನಾಗರಿಕ ಸೇವಾ ನಿಯಮಾವಳಿಗಳ ನಿಯಮ 100 (3)ರ ಪ್ರಕಾರ ಕರ್ತವ್ಯದ ಅವಧಿಯೆಂದು ಪರಿಗಣಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

25/10/2012
(ಎನ್.ವೈ.ಸಾಗರ್)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

25/x/12

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು (ಲೆಕ್ಕ ಪತ್ರ 1 & 2) / (ಆಡಿಟ್)
2. ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ
3. ಮುಖ್ಯ ಇಂಜಿನಿಯರ, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ರಿಸಾಲ್ದಾರ್ ರಸ್ತೆ, ಶೇಷಾದ್ರಿಪುರಂ, ಬೆಂಗಳೂರು.
4. ಮುಖ್ಯ ಕಾರ್ಯಾಚರಣೆ ಅಧಿಕಾರಿ, ಕೆ.ಆರ್.ಆರ್.ಡಿ.ಎ., ರಾಜಕುಮಾರ್ ರಸ್ತೆ, ರಾಜಾಜಿನಗರ 1ನೇ ಬ್ಲಾಕ್, ಬೆಂಗಳೂರು.
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಮೈಸೂರು.
6. ಅಧೀಕ್ಷಕ ಇಂಜಿನಿಯರ್, ಪಂ.ರಾ.ಇಂ.ವೃತ್ತ, ಮೈಸೂರು.
7. ಶ್ರೀ ಸಿ.ಎಸ್.ರಾಜಶೇಖರೇಗೌಡ, ತಾಂತ್ರಿಕ ಸಹಾಯಕರು, ಅಧೀಕ್ಷಕ ಅಭಿಯಂತರವರ ಕಛೇರಿ, ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತ, ಮೈಸೂರು.

8. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ, (ಸೇವೆಗಳು– ಎ ಮತ್ತು ಸಿ).
9. ಗ್ರಾ.ಅ.ಪಂ.ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ/ ಉಪ ಕಾರ್ಯದರ್ಶಿ ಇವರುಗಳ ಅಪ್ತ ಕಾರ್ಯದರ್ಶಿ / ಅಪ್ತ ಸಹಾಯಕರಿಗೆ.
10. ಸರ್ಕಾರದ ಅಧೀನ ಕಾರ್ಯದರ್ಶಿ, ಗ್ರಾ.ಅ.ಪಂ.ರಾಜ್ ಇಲಾಖೆ (ಸೇವೆಗಳು–ಬಿ)
11. ಮೇಲ್ವಿಚಾರಕರು, ಗಣಕಕೇಂದ್ರ, ಗ್ರಾ.ಅ.ಪಂ.ರಾಜ್. ಇಲಾಖೆ ಇವರಿಗೆ ವೆಬ್‌ಸೈಟಿನಲ್ಲಿ ಪ್ರಕಟಿಸಲು ಕಳುಹಿಸಿದೆ.
12. ರಕ್ಷಾ ಕಡತ / ಮಾಹಿತಿ ಕೇಂದ್ರ/ ಹೆಚ್ಚುವರಿ ಪ್ರತಿಗಳು.